# ಮೈಸೂರು ವಿಶ್ವವಿದ್ಯಾನಿಲಯ

ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ
ಸಂ. 695
3/12/2012

ವಿಷಯ: 2012-13ನೇ ಶೈಕ್ಷಣಿಕ ಸಾಲಿಗೆ ಅತಿಥಿ ಉಪನ್ಯಾಸಕರನ್ನು ಆಹ್ವಾನಿಸುವ ಬಗ್ಗೆ.

ಉಲ್ಲೇಖ: 1) ಈ ಕಛೇರಿಯ ಆದೇಶ ಸಂಖ್ಯೆ: ಇಟಿ7/162/2010-11 ದಿನಾಂಕ 08-08-2012.
2) ನಿರ್ದೇಶಕರು, ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ, ಮಾನಸಗಂಗೋತ್ರಿ, ಮೈಸೂರು. ಅವರು ರವಾನಿಸಿರುವ ಪತ್ರ ಸಂ. ಕುವೆಂಮುಕಸಂ/ಎಸಿ-2/2012-13/3093 ದಿನಾಂಕ 18-10-2012

---

## ಆದೇಶ ಸಂಖ್ಯೆ: ಇಟಿ 7/162/2010-11 ದಿನಾಂಕ 04 ನೇ ಡಿಸೆಂಬರ್ 2012

ಮಾನ್ಯ ಕುಲಪತಿಯವರ ಅನುಮೋದನೆಯ ಮೇರೆಗೆ, ಉಲ್ಲೇಖ(1)ರ ಆದೇಶದಲ್ಲಿ ಡಾ.ಕೆ.ಎಸ್.ಅಜಿ, ಇವರನ್ನು ವಾರಕ್ಕೆ 08 ಗಂಟೆಯ ಬೋಧನ ಕಾರ್ಯವನ್ನು ನಿರ್ವಹಿಸಲು ಅತಿಥಿ ಉಪನ್ಯಾಸಕರಾಗಿ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ, ಮಾನಸಗಂಗೋತ್ರಿ, ಮೈಸೂರು ಇಲ್ಲಿ ಕಾರ್ಯನಿರ್ವಹಿಸುವಂತೆ ಆದೇಶ ನೀಡಲಾಗಿತ್ತು. ಇದನ್ನು ಮಾರ್ಪಡಿಸಿ ಇವರಿಗೆ ಹೆಚ್ಚುವರಿಯಾಗಿ 04 ಗಂಟೆಯ ಬೋಧನಾವಧಿಯನ್ನು ಕೆಳಗೆ ವಿವರಿಸಿರುವಂತೆ 2012-13ನೇ ಶೈಕ್ಷಣಿಕ ವರ್ಷದಲ್ಲಿ ಬೋಧಿಸಿಲು ಕೆಳಕಂಡ ಷರತ್ತುಗಳೊಂದಿಗೆ ಹಂಚಿಕೆ ಮಾಡಲಾಗಿದೆ.
ಈ ಆದೇಶವು ದಿನಾಂಕ 08-08-2012 ರಿಂದ ಜಾರಿಗೆ ಬಂದಂತೆ ನೀಡಲಾಗಿದೆ.

| ಅತಿಥಿ ಉಪನ್ಯಾಸಕರ ಹೆಸರು | ವಿಷಯ | ಈಗಾಗಲೇ ವಾರಕ್ಕೆ ವಹಿಸಿರುವ ಬೋಧನಾ ಕಾರ್ಯ | ಹೆಚ್ಚುವರಿ ವಾರಕ್ಕೆ ವಹಿಸಿರುವ ಬೋಧನಾ ಕಾರ್ಯ | ಒಟ್ಟು ಬೋಧನಾ ಕಾರ್ಯ ವಾರಕ್ಕೆ | ಹಿಂದಿನ ಆದೇಶದಲ್ಲಿ ನೀಡಿದ್ದ ಸಂಭಾವನೆ | ಪ್ರಸ್ತುತ ನಿಗದಿಪಡಿಸಿರುವ, ಒಟ್ಟು ಮಾಹೆಯಾನ ಸಂಭಾವನೆ |
|---|---|---|---|---|---|---|
| ಡಾ.ಕೆ.ಎಸ್.ಅಜಿ | ಭಾಷಾಶಾಸ್ತ್ರ | 08 ಗಂಟೆ | 04 ಗಂಟೆ | 12 ಗಂಟೆ | 11000=00 | 16,500=00 |

* ಬೋಧನಾ ವಿಷಯ, ಥಿಯರಿ/ ಪ್ರಾಕ್ಟಿಕಲ್ ಕಾರ್ಯದ ಬಗ್ಗೆ ಸಂಬಂಧಿಸಿದ, ಸಂಸ್ಥೆಯ ನಿರ್ದೇಶಕರು ಹಂಚಿಕೆ ಮಾಡುವರು. ಎರಡು ಪ್ರಾಯೋಗಿಕ ಬೋಧನಾ ಕಾರ್ಯವು ಒಂದು ಥಿಯರಿ ಬೋಧನಾ ಕಾರ್ಯಕ್ಕೆ ಸಮಾನವಾಗಿರುತ್ತದೆ.

ಈ ವೆಚ್ಚವನ್ನು 2011-12ನೇ ಸಾಲಿನ ಆಯವ್ಯಯ ಅಂದಾಜುಗಳ "ವೇತನ ಮತ್ತು ಭತ್ಯೆಗಳು" ಖಾತೆಯ "ತಾತ್ಕಾಲಿಕ ಅಧ್ಯಾಪಕರ ವೇತನ" ಶೀರ್ಷಿಕೆಯಿಂದ ಭರಿಸುವುದು (ಕೋಡ್-228).

ಷರತ್ತುಗಳು:

ಅ. ವಾರಕ್ಕೆ 12 ಗಂಟೆಗಳ ಬೋಧನಾ ಕಾರ್ಯನಿರ್ವಹಿಸಲು ಆಹ್ವಾನಿತವಾಗಿರುವ ಅತಿಥಿ ಉಪನ್ಯಾಸಕರುಗಳು ಪ್ರತಿದಿನ ವಿಭಾಗ / ಕಾಲೇಜಿನ ಕೆಲಸದ ಪೂರ್ಣಾವಧಿಯಲ್ಲಿ ಕಡ್ಡಾಯವಾಗಿ ಉಪಸ್ಥಿತರಿದ್ದು, ವಿದ್ಯಾರ್ಥಿಗಳ ಮಾರ್ಗದರ್ಶನಕ್ಕೆ ಲಭ್ಯವಿರಬೇಕು. ಇಂತಹ ಅತಿಥಿ ಉಪನ್ಯಾಸಕರು ಪ್ರತಿ ಮಾಹೆಯಲ್ಲಿ ಒಂದು ದಿವಸ ಸಾಂದರ್ಭಿಕ ರಜೆಯನ್ನು ಪಡೆಯಲು ಅರ್ಹರಿರುತ್ತಾರೆ. ಹೀಗೆ ರಜೆ ಪಡೆದಾಗ ತಪ್ಪಿದ ತರಗತಿಗಳನ್ನು ಮುಂದಿನ ದಿನಗಳಲ್ಲಿ ಸರಿದೂಗಿಸುವುದು.

ಆ. ಹಂಚಿಕೆಯಾಗಿರುವ ಬೋಧನಾ ತರಗತಿಗಳನ್ನು ತೆಗೆದುಕೊಳ್ಳಲು ವಿಫಲರಾದಲ್ಲಿ, ಗೈರುಹಾಜರಾದ ದಿನದ ಸಂಭಾವನೆಯನ್ನು ಕಡಿತಗೊಳಿಸಲಾಗುವುದು.

ಆಹ್ವಾನಿತ ಅತಿಥಿ ಉಪನ್ಯಾಸಕರು ಕೆಲಸಕ್ಕೆ ವರದಿ ಮಾಡಿಕೊಳ್ಳುವಾಗ ಈ ಕೆಳಕಂಡಂತೆ ಮುಚ್ಚಳಿಕೆಯನ್ನು ನೀಡತಕ್ಕದ್ದು.

**ಮುಚ್ಚಳಿಕೆ**

1. ಈ ಮೂಲಕ ಪ್ರಮಾಣೀಕರಿಸುವುದೇನೆಂದರೆ, ವಿಶ್ವವಿದ್ಯಾನಿಲಯವು 2012–13ನೇ ಶೈಕ್ಷಣಿಕ ವರ್ಷಕ್ಕೆ ಅಥವಾ ಮುಂದಿನ ಆದೇಶದವರೆಗೆ, ಯಾವುದು ಮೊದಲು ಘಟಿಸುವುದೋ ಅಲ್ಲಿಯವರೆಗೆ ಬೋಧನಾ ಕಾರ್ಯವನ್ನು ನಿರ್ವಹಿಸಲು ನನ್ನನ್ನು ಆಹ್ವಾನಿಸಿರುವುದು ತಾತ್ಕಾಲಿಕವಾಗಿರುತ್ತದೆ ಎಂದು ತಿಳಿದಿರುತ್ತೇನೆ. ಜೊತೆಗೆ ವಿಶ್ವವಿದ್ಯಾನಿಲಯವು ಯಾವುದೇ ಮುನ್ಸೂಚನೆ ಇಲ್ಲದಂತೆ ಹಾಗೂ ಯಾವುದೇ ಕಾರಣ ನೀಡದೆ ನನಗೆ ನೀಡಿರುವ ಅತಿಥಿ ಉಪನ್ಯಾಸಕರ ಆಹ್ವಾನವನ್ನು ಹಿಂಪಡೆಯಬಹುದಾಗಿದೆ.

2. ನಾನು ಪೂರ್ಣಕಾಲಿಕ ಅತಿಥಿ ಉಪನ್ಯಾಸಕನಾಗಿ ಆಹ್ವಾನಿತನಾದ ವಿವಿಧ ಸ್ನಾತಕೋತ್ತರ ವಿಭಾಗ / ಸ್ನಾತಕೋತ್ತರ ಕೇಂದ್ರ / ಘಟಕ ಕಾಲೇಜಿನಲ್ಲಿ ಪೂರ್ಣಾವಧಿಯಲ್ಲಿ ಹಾಜರಿದ್ದು ಕಾರ್ಯನಿರ್ವಹಿಸುತ್ತೇನೆ.

3. ಮುಂದುವರಿಕೆಯಾಗಿ, ಮೈಸೂರು ವಿಶ್ವವಿದ್ಯಾನಿಲಯದ ಅತಿಥಿ ಉಪನ್ಯಾಸಕನ ಹೊರತಾಗಿ ನಾನು ಯಾವುದೇ ಖಾಸಗಿ / ಸರ್ಕಾರಿ / ವಿಶ್ವವಿದ್ಯಾನಿಲಯ ಸಂಸ್ಥೆಗಳಲ್ಲಿ ಬೋಧನಾ ಕಾರ್ಯವನ್ನು ನಿರ್ವಹಿಸುವುದಿಲ್ಲವೆಂದು ಈ ಮೂಲಕ ದೃಢೀಕರಿಸುತ್ತೇನೆ.

ಮೇಲಿನ ಎಲ್ಲಾ ಷರತ್ತುಗಳಿಗೆ ಬದ್ಧನಾಗಿ ತಾವು ನೀಡಿರುವ ಅತಿಥಿ ಉಪನ್ಯಾಸಕರ ಆಹ್ವಾನವನ್ನು ಒಪ್ಪಿಕೊಂಡಿರುತ್ತೇನೆ.

ಆದೇಶದ ಮೇರೆಗೆ,

4/12/12

ಕುಲಸಚಿವ

ಇವರಿಗೆ:

1. ಸಂಬಂಧಪಟ್ಟ ಅತಿಥಿ ಉಪನ್ಯಾಸಕರಿಗೆ – ನಿರ್ದೇಶಕರು, ಕುವೆಂಪು ಕನ್ನಡ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು.
2. ನಿರ್ದೇಶಕರು, ಕುವೆಂಪು ಕನ್ನಡ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು.
3. ಕುಲಸಚಿವರು (ಪರೀಕ್ಷಾಂಗ), ಮೈವಿವಿ, ಮೈಸೂರು.
4. ಹಣಕಾಸು ಅಧಿಕಾರಿಯವರು, ಮೈವಿವಿ, ಮೈಸೂರು.
5. ಸರ್ಕಾರಿ ಲೆಕ್ಕ ಪರಿಶೋಧಕರು, ಮೈವಿವಿ, ಮೈಸೂರು.
6. ಉಪಕುಲಸಚಿವರು(ಸಾಮಾನ್ಯ)/ಸಹಾಯಕ ಕುಲಸಚಿವ/ಅಧೀಕ್ಷಕರು (ಸಿಬ್ಬಂದಿ), ಆಡಳಿತ ಶಾಖೆ, ಮೈವಿವಿ,ಮೈಸೂರು.
7. ಕುಲಪತಿಯವರ ಆಪ್ತ ಕಾರ್ಯದರ್ಶಿಯವರು, ಮೈವಿವಿ, ಮೈಸೂರು.
8. ಕುಲಪತಿ/ಕುಲಸಚಿವ/ಹಣಕಾಸು ಅಧಿಕಾರಿ/ಕುಲಸಚಿವ(ಪ) ಅವರುಗಳ ಆಪ್ತ ಸಹಾಯಕರು, ಮೈವಿವಿ, ಮೈಸೂರು.
9. ಕಛೇರಿ ಪ್ರತಿ.